**ಅತೀ ತುರ್ತು (ಪ್ರಥಮಾದ್ಯತೆ)**

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 231 ಜಿಪಸ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:27-07-2018.

**ಇವರಿಂದ:**

**ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್),**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

**ಇವರಿಗೆ:**

1. **ರಾಜ್ಯದ ಎಲ್ಲಾ ಮುಖ್ಯ ಲೆಕ್ಕಾಧಿಕಾರಿಗಳು,**
   **ಎಲ್ಲಾ ಜಿಲ್ಲಾ ಪಂಚಾಯತಿಗಳು.**
2. **ರಾಜ್ಯದ ಎಲ್ಲಾ ಮುಖ್ಯ ಯೋಜನಾಧಿಕಾರಿಗಳು,**
   **ಎಲ್ಲಾ ಜಿಲ್ಲಾ ಪಂಚಾಯತಿಗಳು**

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿಗಳನ್ನು PFMS ತಂತ್ರಾಂಶದಲ್ಲಿ ನಮೂದಿಸುವ ಬಗ್ಗೆ.

**ಉಲ್ಲೇಖ:** ಭಾರತ ಸರ್ಕಾರ ಪಂಚಾಯತ್ ರಾಜ್ ಮಂತ್ರಾಲಯದ ಕಾರ್ಯದರ್ಶಿಗಳ ಅರೆ ಸರ್ಕಾರಿ ಪತ್ರ ಸಂಖ್ಯೆ:ಎನ್-19011(16)/8/2016-ಇ-ಪಂಚಾಯತ್ (18932), ದಿನಾಂಕ:21-06-2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 14ನೇ ಹಣಕಾಸು ಆಯೋಗದ ಅನುದಾನದಲ್ಲಿ ಪಾರದರ್ಶಕತೆ ಹಾಗೂ ವೆಚ್ಚದ ನಿರ್ವಹಣೆಯನ್ನು ಸೂಕ್ತವಾಗಿ ನಿರ್ವಹಿಸಲು ಹಾಗೂ ಗ್ರಾಮ ಪಂಚಾಯತಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು PFMS ತಂತ್ರಾಂಶವನ್ನು ಕಡ್ಡಾಯವಾಗಿ ಬಳಸುವಂತೆ ಉಲ್ಲೇಖಿತ ಅರೆ ಸರ್ಕಾರಿ ಪತ್ರದಲ್ಲಿ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ಸೂಚಿಸಿರುತ್ತದೆ. PFMS ತಂತ್ರಾಂಶದಲ್ಲಿ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿಗಳನ್ನು ಖಾತೆ ರಹಿತವಾಗಿಯೂ ಮತ್ತು ಗ್ರಾಮ ಪಂಚಾಯತಿಗಳನ್ನು ಖಾತೆಯೊಂದಿಗೆ ನೋಂದಣಿ ಮಾಡುವ ಅವಶ್ಯಕತೆ ಇರುತ್ತದೆ. ಆದ್ದರಿಂದ, ಈಗಾಗಲೇ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಿಂದ 30 ಜಿಲ್ಲಾ ಪಂಚಾಯತಿಗಳನ್ನು ಹಾಗೂ 173 ತಾಲ್ಲೂಕು ಪಂಚಾಯತಿಗಳನ್ನು ಆಯಾ ಜಿಲ್ಲಾ ಪಂಚಾಯತಿಗಳ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳ ಮೂಲಕ PFMS ತಂತ್ರಾಂಶದಲ್ಲಿ ನೋಂದಾಯಿಸಲಾಗಿದೆ.

ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಯೋಜನಾ ವ್ಯವಸ್ಥಾಪಕರ (ಡಿ.ಪಿ.ಎಂ.ಯು)ಗಳ ಸಹಯೋಗದೊಂದಿಗೆ ತಾಲ್ಲೂಕು ಪಂಚಾಯತಿಯವರು ಸಂಬಂಧಿಸಿದ ಗ್ರಾಮ ಪಂಚಾಯತಿಗಳ 14ನೇ ಹಣಕಾಸು ಆಯೋಗದ ಅನುದಾನದ ಉಳಿತಾಯ ಖಾತೆಗಳೊಂದಿಗೆ ನೋಂದಾಯಿಸುವ ಅವಶ್ಯಕತೆ ಇರುತ್ತದೆ.

ಗ್ರಾಮ ಪಂಚಾಯತಿಗಳನ್ನು ನೋಂದಣಿ ಮಾಡಲು ಅವಶ್ಯಕವಾದ ಕೈಪಿಡಿ(Manual) ಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ತಾಲ್ಲೂಕು ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಂ.ಐ.ಎಸ್ ಕೋ-ಆರ್ಡಿನೇಟರ್ಸ್‌ಗಳ ಸಹಕಾರದೊಂದಿಗೆ ದಿನಾಂಕ:05-08-2018ರೊಳಗಾಗಿ ಕಡ್ಡಾಯವಾಗಿ ನೋಂದಾಯಿಸುವಂತೆ ಹಾಗೂ ಈ ಕೆಳಕಂಡ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದೆ. ತಪ್ಪಿದ್ದಲ್ಲಿ ತಮ್ಮ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

1. ಈಗಾಗಲೇ ಪಂಚತಂತ್ರ ತಂತ್ರಾಂಶದಲ್ಲಿ ಅಳವಡಿಸಲಾಗಿರುವ 14ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆಗಳ ಮಾಹಿತಿಯನ್ನೇ PFMS ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು.

2. ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಯೋಜನಾ ವ್ಯವಸ್ಥಾಪಕರ (ಡಿ.ಪಿ.ಎಂ.ಯು)ಗಳ ಸಹಯೋಗದೊಂದಿಗೆ ತಾಲ್ಲೂಕು ಪಂಚಾಯತಿಯ ಎಂ.ಐ.ಎಸ್ ಕೋ-ಆರ್ಡಿನೇಟರ್ಸ್ ಸಂಬಂಧಿಸಿದ ಗ್ರಾಮ ಪಂಚಾಯತಿಗಳ 14ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆಗಳನ್ನು ನೋಂದಾಯಿಸುವ ಸಂದರ್ಭದಲ್ಲಿ ಯಾವುದೇ ತಪ್ಪುಗಳು ಆಗದೇ ಇರುವಂತೆ ಮುಂಜಾಗ್ರತೆ ವಹಿಸುವುದು.

3. ಸರ್ಕಾರದ ಗಮನಕ್ಕೆ ಬಂದಿರುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳು 14ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆಗಳನ್ನು ತಾತ್ಕಾಲಿಕವಾಗಿ ತಡೆಹಿಡಿಯುತ್ತಿದ್ದಾರೆ. ಇನ್ನು ಮುಂದೆ ಈ ರೀತಿ ತಾತ್ಕಾಲಿಕವಾಗಿ ತಡೆಹಿಡಿಯುವುದು ನಿಷೇಧಿಸಲಾಗಿದೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ.

4. 14ನೇ ಹಣಕಾಸು ಆಯೋಗ ಅನುದಾನದ ಅವಧಿಯು ಮುಕ್ತಾಯಗೊಳ್ಳುವವರೆವಿಗೂ ಸದರಿ ಖಾತೆಗಳೇ 14ನೇ ಹಣಕಾಸು ಆಯೋಗ ಅನುದಾನದ ಖಾತೆಗಳಾಗಿ ಮುಂದುವರೆಸುವುದು. ಯಾವುದೇ ಕಾರಣಕ್ಕೂ ಸದರಿ ಬ್ಯಾಂಕ್ ಖಾತೆಗಳನ್ನು ಬದಲಾಯಿಸುವಂತಿಲ್ಲ.

5. **PFMS ತಂತ್ರಾಂಶದಲ್ಲಿ 14ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆಗಳನ್ನು ನಮೂದಿಸಿದಾಗ ಮಾತ್ರ 14ನೇ ಹಣಕಾಸು ಆಯೋಗ ಅನುದಾನವು ಲಭಿಸುತ್ತದೆ.**

ಮೇಲೆ ತಿಳಿಸಿದಂತೆ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ತಾಲ್ಲೂಕು ಎಂ.ಐ.ಎಸ್ ಕೋ-ಆರ್ಡಿನೇಟರ್ಸ್ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ತಿಳಿಸುವುದು. **ಗ್ರಾಮ ಪಂಚಾಯತಿ 14ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆಗಳನ್ನು PFMS ತಂತ್ರಾಂಶದಲ್ಲಿ ಅಳವಡಿಸುವ ಪ್ರಕ್ರಿಯೆಗಳನ್ನು ಮೇಲುಸ್ತುವಾರಿ ಮಾಡಲು ಆಯಾ ತಾಲ್ಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಕ್ತ ತಿಳುವಳಿಕೆಯನ್ನು ಮುಖ್ಯ ಯೋಜನಾಧಿಕಾರಿಗಳು ನೀಡುವುದು ಹಾಗೂ 14ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆಗಳ ಸಹಿತ ನೋಂದಣಿ ಮಾಡುವಾಗ ಯಾವುದೇ ತಪ್ಪುಗಳು ಆಗದಂತೆ ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು ನೋಡಿಕೊಳ್ಳುವ ಜವಾಬ್ದಾರಿಯನ್ನು ನೀಡಲಾಗಿದೆ.**

ತಮ್ಮ ವಿಶ್ವಾಸಿ,

27/7/18

(ಕೆ.ಯಾಲಕ್ಕಿಗೌಡ)

ನಿರ್ದೇಶಕರು (ಪಂ.ರಾಜ್-2)ಹಾಗೂ

ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

KSL 27/7/18

<u>ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:</u>

1. **ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳು.**
2. ರಾಜ್ಯದ ಎಲ್ಲಾ ಜಿಲ್ಲಾ ಯೋಜನಾ ವ್ಯವಸ್ಥಾಪಕರು, ಎಲ್ಲಾ ಜಿಲ್ಲಾ ಪಂಚಾಯತಿಗಳು.
3. ರಾಜ್ಯದ ಎಲ್ಲಾ ತಾಲ್ಲೂಕು ಎಂ.ಐ.ಎಸ್. ಕೋ-ಆರ್ಡಿನೇಟರ್ಸ್, ಎಲ್ಲಾ ತಾಲ್ಲೂಕು ಪಂಚಾಯತಿಗಳು.